# ಸರ್ಕಾರಿ ಯೋಜನೆ ಸಾಫಲ್ಯಕ್ಕೆ ಸಹಭಾಗಿತ್ವ ಬೇಕು

## ದೇಶಪಾಂಡೆ ಫೌಂಡೇಶನ್‌ನಲ್ಲಿ ಸಂವಾದ ಕಾರ್ಯಕ್ರಮ | ಸಚಿವ ಕೃಷ್ಣ ಭೈರೇಗೌಡ ಅಭಿಮತ

**ಸಂ.ಕ ಸಮಾಚಾರ ಹುಬ್ಬಳ್ಳಿ**

ಸರ್ಕಾರಗಳು ಮಹತ್ವಾಕಾಂಕ್ಷೆಯುಳ್ಳ ಯೋಜನೆ ಅನುಷ್ಠಾನಗೊಳಿಸಬಹುದು. ಆದರೆ, ಅವುಗಳು ಪರಿಣಾಮಕಾರಿ ಅನುಷ್ಠಾನಗೊಳ್ಳಬೇಕಾದರೆ, ಸಾಮಾಜಿಕ ಕಾಳಜಿ, ಕಳಕಳಿವುಳ್ಳ ಸಂಘ-ಸಂಸ್ಥೆಗಳ ಜೊತೆಗೆ ಸಾರ್ವಜನಿಕರ ಸಹಭಾಗಿತ್ವ ಪ್ರಮುಖವಾಗಿರುತ್ತದೆ ಎಂದು ಗ್ರಾಮೀಣಾಭಿವೃದ್ಧಿ ಸಚಿವ ಕೃಷ್ಣಭೈರೇಗೌಡ ಅಭಿಪ್ರಾಯಪಟ್ಟರು.

ಶನಿವಾರ ಹುಬ್ಬಳ್ಳಿಯ ವಿದ್ಯಾನಗರದ ದೇಶಪಾಂಡೆ ಫೌಂಡೇಶನ್‌ನಲ್ಲಿ ನಡೆದ ಡೆವಲಪ್‌ಮೆಂಟ್ ಡೈಲಾಗ್‌ನ 'ಮರುಕಳಿಸುವ ಸಹಭಾಗಿತ್ವದಲ್ಲಿ' ಎಂಬ ಸಂವಾದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಈ ದಿಸೆಯಲ್ಲಿ ಶ್ರೇಣಿಕೃತ ಸಮಾಜದ ಪ್ರತಿಯೊಬ್ಬರೂ ದೂರದೃಷ್ಟಿಯೊಂದಿಗೆ ಶ್ರಮಿಸಬೇಕು. ಅಂದಾಗ ಮಾತ್ರ ಸರ್ಕಾರದ ಉದ್ದೇಶ, ಸಾಮಾಜಿಕ ಪ್ರಗತಿ ಎರಡೂ ಈಡೇರಲು ಸಾಧ್ಯ ಎಂದರು.

ಸರ್ಕಾರ, ಸಂಘ-ಸಂಸ್ಥೆಗಳು ಹಾಗೂ ಸಮುದಾಯದ ಸಹಭಾಗಿತ್ವದಲ್ಲಿ ಮಾತ್ರ ಗ್ರಾಮೀಣಾಭಿವೃದ್ಧಿ ಸಾಧ್ಯ. ಈ ನಿಟ್ಟಿನಲ್ಲಿ ಸರ್ಕಾರಗಳು ಮಹತ್ವದ ನಿರ್ಧಾರ ಕೈಗೊಂಡಿವೆ. ವಾಸ್ತವದಲ್ಲಿ ಸಂಘ-ಸಂಸ್ಥೆಗಳು ಹಾಗೂ ಸಮುದಾಯದ ಸಹಭಾಗಿತ್ವದ ಅವಶ್ಯಕತೆ ಅಲ್ಲಗಳೆಯುವಂತಿಲ್ಲ ಎಂದು ಅಭಿಪ್ರಾಯಪಟ್ಟರು.

ಸ್ವಾತಂತ್ರ್ಯ ನಂತರ ಅಸ್ತಿತ್ವಕ್ಕೆ ಬಂದ ಎಲ್ಲ ಸರ್ಕಾರಗಳು ಗ್ರಾಮೀಣಾಭಿವೃದ್ಧಿ ಪರಿಕಲ್ಪನೆಯುಳ್ಳ ಯೋಜನೆಗಳ ಅನುಷ್ಠಾನಕ್ಕೆ ಶ್ರಮಿಸಿವೆ. ಸರ್ಕಾರದ ಜೊತೆಗೆ ಸಂಘ-ಸಂಸ್ಥೆಗಳ ಸಹಭಾಗಿತ್ವಕ್ಕೂ ಮಾನ್ಯತೆ ನೀಡಿವೆ. ಯೋಜನೆಗಳ ಅನುಷ್ಠಾನಕ್ಕೆ ಅಗತ್ಯವಿರುವ ಅನುದಾನ ಬಿಡುಗಡೆಗೊಳಿಸುತ್ತಲೇ ಇವೆ. ಸಂಘ-ಸಂಸ್ಥೆಗಳ ಪರಿಶ್ರಮಕ್ಕೆ ಪ್ರೋತ್ಸಾಹ ನೀಡುವ ನಿಟ್ಟಿನಲ್ಲಿಯೂ ಅನುದಾನ ನೀಡುತ್ತಿವೆ. ಇವೆಲ್ಲವುಗಳ ಮಧ್ಯೆ ಸಮುದಾಯದ ಸಹಭಾಗಿತ್ವ ಮಹತ್ವದ್ದಾಗಿದೆ ಎಂದು ಪ್ರತಿಪಾದಿಸಿದರು.



ಇನ್ಫೋಸಿಸ್ ಮುಖ್ಯಸ್ಥ ನಾರಾಯಣಮೂರ್ತಿ ಮಾತನಾಡಿ, ಸರ್ಕಾರದ ಅನುದಾನ ಪಡೆದುಕೊಳ್ಳುವ ಸಂಘ-ಸಂಸ್ಥೆಗಳು ಪ್ರಾಮಾಣಿಕತೆಯಿಂದ ಕಾರ್ಯನಿರ್ವಹಿಸಬೇಕು. ಅಂದಾಗ ಮಾತ್ರ ಸರ್ಕಾರದ ಅನುದಾನ ಹಾಗೂ ಯೋಜನೆಗಳ ಉದ್ದೇಶ ಸಾರ್ಥಕತೆ ಪಡೆದುಕೊಳ್ಳಲು ಸಾಧ್ಯ. ಇತ್ತೀಚಿನ ದಿನಗಳಲ್ಲಿ ಸಂಘ-ಸಂಸ್ಥೆಗಳು, ಸಾಮಾಜಿಕ ಕಾರ್ಯ ಉದ್ದೇಶ ಹೊಂದಿರುವ ಖಾಸಗಿ ಸಂಸ್ಥೆಗಳು ಸ್ವಾರ್ಥಪರ ಚಿಂತನೆಗಳ ಸಾಫಲ್ಯತೆಗೆ ಆದ್ಯತೆ ನೀಡುತ್ತಿವೆ. ಇಂತಹ ಉದ್ದೇಶಗಳಿಂದಾಗಿ ಸರ್ಕಾರದ ಅನುದಾನ ದುರ್ಬಳಕೆಯಾಗುತ್ತಿದೆ ಹೊರತು, ಮೂಲ ಉದ್ದೇಶ ಈಡೇರುವುದಿಲ್ಲ. ಹೀಗಾಗಿ ವಾಸ್ತವಿಕತೆ ನೆಲಗಟ್ಟಿನಲ್ಲಿ ಖಾಸಗಿ ಸಂಸ್ಥೆಗಳು ಕಾರ್ಯನಿರ್ವಹಿಸಬೇಕು ಎಂದು ಹೇಳಿದರು.

ಸರ್ಕಾರದ ಮುಖ್ಯ ಕಾರ್ಯದರ್ಶಿ ವಿಜಯಭಾಸ್ಕರ ಮಾತನಾಡಿ, ಹಿಂದುಳಿದ ಸಮುದಾಯಗಳ ಅಭಿವೃದ್ಧಿ ಶಿಕ್ಷಣದಿಂದ ಮಾತ್ರ ಸಾಧ್ಯ. ಹೀಗಾಗಿಯೇ ಸಾಮಾಜಿಕ ಹಾಗೂ ಆರ್ಥಿಕ ಹಿಂದುಳಿದ ಸಮುದಾಯಗಳು ಸರ್ವಾಂಗೀಣ ಅಭಿವೃದ್ಧಿ ಹೊಂದಬೇಕಾದರೆ ಶಿಕ್ಷಣ ಅವಶ್ಯ. ಹೀಗಾಗಿಯೇ ಸರ್ಕಾರಗಳು ಮೂಲಭೂತ ಸೌಕರ್ಯಗಳನ್ನು ಸರ್ಕಾರಿ ಶಿಕ್ಷಣ ಸಂಸ್ಥೆಗಳಿಗೆ ನೀಡಿ, ಪ್ರತಿಯೊಬ್ಬರೂ ಸುಶಿಕ್ಷಿತರಾಗುವಂತೆ ನೋಡುಕೊಳ್ಳುತ್ತಿವೆ ಎಂದು ನುಡಿದರು. ಕೇವಲ ಹಣದಿಂದ ಗ್ರಾಮೀಣ ಸಮಸ್ಯೆ ನಿವಾರಿಸಲು ಸಾಧ್ಯವಿಲ್ಲ. ಗ್ರಾಮೀಣಾಭಿವೃದ್ಧಿಗೆ ಸರ್ಕಾರಗಳು ಜಾರಿಗೊಳಿಸಿರುವ ಮಹತ್ವಾಕಾಂಕ್ಷಿ ಯೋಜನೆಗಳ ವೈಜ್ಞಾನಿಕ ಅನುಷ್ಠಾನದ ಅವಶ್ಯಕತೆ ಇದೆ. ಸಮುದಾಯದ ಸಹಭಾಗಿತ್ವದ ಅನಿವಾರ್ಯತೆ ಇದೆ. ಗ್ರಾಮಗಳು ಅಭಿವೃದ್ಧಿ ಹೊಂದಿದರೆ ಮಾತ್ರ ರಾಜ್ಯ, ರಾಷ್ಟ್ರ ಅಭಿವೃದ್ಧಿ ಹೊಂದಲು ಸಾಧ್ಯ. ಗ್ರಾಮೀಣ ಪ್ರದೇಶಗಳ ನಾಗರಿಕರು ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡಲು ಮುಂದಾಗಬೇಕು. ಶಿಕ್ಷಣದಿಂದ ಮಾತ್ರ ಅಭಿವೃದ್ಧಿ ಸಾಧ್ಯ ಎಂಬುದು ವಾಸ್ತವ. ಹೀಗಾಗಿ ವಾಸ್ತವಿಕತೆ ನೆಲಗಟ್ಟಿನಲ್ಲಿ ಸಾಮಾಜಿಕ ಸಮಸ್ಯೆ ನಿವಾರಿಸಿ, ಅಭಿವೃದ್ಧಿ ಚಿಂತನೆಗಳ ಸಾಫಲ್ಯತೆಗೆ ಮುಂದಾಗಬೇಕು ಎಂದು ಹೇಳಿದರು. ಪ್ರಾಸನೇಸ್ ಹಾಗೂ ಪ್ರದೀಪ ನಾಯರ್ ಸಂವಾದ ನಡೆಸಿಕೊಟ್ಟರು.